1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.509/2017

ಹೆಸರುಃ ಸಂತೋಷ್ ನಾಯ್ಕ ಚಾಸಾಃ 5

ತಂದೆಃ ನಾಗ್ಯಾನಾಯ್ಕ ಫ್ರಾಸಾ: 2

ವಯಸ್ಸುಃ 25

ಉದ್ಯೋಗಃ ಕೂಲಿ

ವಾಸ ಸ್ಥಳಃ ಮಾವಿನಕಟ್ಟೆ, ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 23-11-2022 ರಂದು ಪ್ರಮಾಣ ವಚನ

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಆರೋಪಿತರು ನನ್ನ ಸಂಬಂಧಿಕರು . ಆರೋಪಿಗಳು ಮತ್ತು ನಮ್ಮ ಮಧ್ಯೆ ಯಾವುದೇ ಗಲಾಟೆ ನಡೆದಿಲ್ಲ, ಆರೋಪಿಗಳು ನಮಗೆ ಅವಾಚ್ಯ ಶಬ್ದಗಳಿಂದ ಬೈಯ್ದಿಲ್ಲ, ಹೊಡೆದಿಲ್ಲ, ಕೊಲೆ ಬೆದರಿಕೆ ಹಾಕಿಲ್ಲ.

ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ .

ಪೊಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಹೇಳಿಕೆಯನ್ನು ನೋಡಲಾಗಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 02-08-2017 ರಂದು ನಮ್ಮ ಮನೆಯ ಗೋಡೆ ಬಿದ್ದಿರುತ್ತದೆ ಎಂದರೆ ಸರಿಯಲ್ಲ. ಸದರಿ ಗೋಡೆಯನ್ನು ನಾವು ಕಟ್ಟಲು ಹೋದಾಗ ಸಂಜೆ 5.00 ಗಂಟೆಯ

ಸಮಯದಲ್ಲಿ ಆರೋಪಿತರು ಬಂದು ಏಕಾ ಏಕೀ ಅವಾಚ್ಯವಾಗಿ ಬೈಯ್ದಿದ್ದುರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ 3 ನೇ ಆರೋಪಿಯು ಮನೆಯ ಒಳಗೆ ನುಗ್ಗಿ ಕೈ ಹಿಡಿದು ಚಾಸಾ 1 ರವರಿಗೆ ಎದೆಗೆ ಕೈಯಿಂದ ಹೊಡೆದು ನನ್ನ ಜಾಕೀಟನ್ನು ಕಿತ್ತು ಹಾಕಿರುತ್ತಾನೆ ಎಂದರೆ ಸರಿಯಲ್ಲ. ನನ್ನ ತಾಯಿಯ 1 ಮತ್ತು 2 ನೇ ಆರೋಪಿತರು ಸೀರೆ ಹಿಡಿದು , ನನ್ನ ತಲೆ ಕೂದಲು ಹಿಡಿದು ಎಳೆದಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಾನು ಜಗಳ ಬಿಡಿಸಲು ಹೋದ ಸಮಯದಲ್ಲಿ ಅವರಿಗೂ ಸಹ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ನನಗೆ 2 ನೇ ಆರೋಪಿಯು ಕೈ ಕಾಲುಗಳಿಂದ ನೆಲಕ್ಕೆ ಬೀಳಿಸಿ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ಆರೋಪಿತರೆಲ್ಲರೂ ಸೇರಿ ನಮಗೆ ಜೀವ ಬೆದರಿಕೆಯನ್ನು ಹಾಕಿರುತ್ತಾರೆ ಎಂದರೆ ಸರಿಯಲ್ಲ. 3 ನೇ ಆರೋಪಿಯು ಅಲ್ಲೆ ಇದ್ದ ಕೋಲಿನಿಂದ ಚಾಸಾ 1 ರವರಿಗೆ ಕೈಕಾಲುಗಳಿಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ನಾನು ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿಲ್ಲ ಎಂದು ಹೇಳಿಕೆಯನ್ನು ಪೊಲೀಸರಿಗೆ ನೀಡಿರುತೇನೆ ಎಂದರೆ ಸರಿಯಲ್ಲ. ಸದರಿ ಮರುಹೇಳಿಕೆಯನ್ನು ನಿ ಪಿ 4 ಎಂದು ಗುರುತಿಸಲಾಯಿತು .

ಆರೋಪಿತರೊಂದಿಗೆ ರಾಜೀ ಮಾಡಿಕೊಂಡಿರುತ್ತೇನೆ ಎಂದರೆ ಸರಿ . ರಾಜೀ ಮಾಡಿಕೊಂಡ ಕಾರಣ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.509/2017

ಹೆಸರುಃ ಲಲಿತಮ್ಮ ಚಾಸಾಃ 1

ಗಂಡಃ ನಾಗ್ಯಾನಾಯ್ಕ ಫ್ರಾಸಾ: 1

ವಯಸ್ಸುಃ 47

ಉದ್ಯೋಗಃ ಕೂಲಿ

ವಾಸ ಸ್ಥಳಃ ಮಾವಿನಕಟ್ಟೆ, ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 23-11-2022 ರಂದು ಪ್ರಮಾಣ ವಚನ

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಆರೋಪಿತರು ನನ್ನ ಸಂಬಂಧಿಕರು . ಆರೋಪಿಗಳು ಮತ್ತು ನಮ್ಮ ಮದ್ಯೆ ಯಾವುದೇ ಗಲಾಟೆ ನಡೆದಿಲ್ಲ, ಆರೋಪಿಗಳು ನಮಗೆ ಅವಾಚ್ಯ ಶಬ್ದಗಳಿಂದ ಬೈಯಿದ್ದಿಲ್ಲ, ಹೊಡೆದಿಲ್ಲ, ಕೊಲೆ ಬೆದರಿಕೆ ಹಾಕಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸುತ್ತಿದ್ದು ಸಾಕ್ಷಿಯು ಅದರಲ್ಲಿರುವ ತನ್ನ ಹೆಬ್ಬೆಟ್ಟಿನ ಗುರುತನ್ನು ಗುರುತಿಸಿರುತ್ತಾರೆ. ಸದರಿ ದೂರನ್ನು ನಿ ಪಿ 1 ಎಂದು ಗುರುತಿಸಲಾಯಿತು.

ಈಗ ಸಾಕ್ಷಿಗೆ ಮಹಜರ್ ನ್ನು ತೋರಿಸುತ್ತಿದ್ದು ಸಾಕ್ಷಿಯು ಅದರಲ್ಲಿರುವ ತನ್ನ ಹೆಬ್ಬೆಟ್ಟಿನ ಗುರುತನ್ನು ಗುರುತಿಸಿರುತ್ತಾರೆ. ಸದರಿ ಮಹಜರ್ ನ್ನು ನಿಶಾನೆ ಪಿ 2 ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ವಶಪಡಿಸಿಕೊಂಡಿರುವುದಿಲ್ಲ. ಪೊಲೀಸರಿಗೆ ನಾನು ಯಾವುದೇ ಮರುಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ದೂರು ಮತ್ತು ಮಹಜರ್ ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ದೂರು ಮತ್ತು ಮಹಜರ್ ನ್ನು ನೋಡಲಾಗಿ ಸಾಕ್ಷಿಯು ದೂರು ಮತ್ತು ಮಹಜರ್ ಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 02-08-2017 ರಂದು ನಮ್ಮ ಮನೆಯ ಗೋಡೆ ಬಿದ್ದಿರುತ್ತದೆ ಎಂದರೆ ಸರಿಯಲ್ಲ. ಸದರಿ ಗೋಡೆಯನ್ನು ನಾವು ಕಟ್ಟಲು ಹೋದಾಗ ಸಂಜೆ 5.00 ಗಂಟೆಯ ಸಮಯದಲ್ಲಿ ಆರೋಪಿತರು ಬಂದು ಅವಾಚ್ಯವಾಗಿ ಬೈಯ್ದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ 3 ನೇ ಆರೋಪಿಯು ಮನೆಯ ಒಳಗೆ ನುಗ್ಗಿ ಕೈ ಹಿಡಿದು ನನ್ನ ಎದೆಗೆ ಕೈಯಿಂದ ಹೊಡೆದು ನನ್ನ ಜಾಕೀಟನ್ನು ಕಿತ್ತು ಹಾಕಿರುತ್ತಾನೆ ಎಂದರೆ ಸರಿಯಲ್ಲ. 1 ಮತ್ತು 2 ನೇ ಆರೋಪಿತರು ಸೀರೆ ಹಿಡಿದು , ನನ್ನ ತಲೆ ಕೂದಲು ಹಿಡಿದು ಎಳೆದಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಚಾಸಾ 5 ರವರು ಜಗಳ ಬಿಡಿಸಲು ಬಂದ ಸಮಯದಲ್ಲಿ ಅವರಿಗೂ ಸಹ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಮಗನಾದ ಚಾಸಾ 5 ರವರಿಗೆ 2 ನೇ ಆರೋಪಿಯು ಕೈ ಕಾಲುಗಳಿಂದ ನೆಲಕ್ಕೆ ಬೀಳಿಸಿ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ಆರೋಪಿತರೆಲ್ಲರೂ ಸೇರಿ ನನಗೆ ಜೀವ ಬೆದರಿಕೆಯನ್ನು ಹಾಕಿರುತ್ತಾರೆ ಎಂದರೆ ಸರಿಯಲ್ಲ. 3 ನೇ ಆರೋಪಿಯು ಅಲ್ಲೆ ಇದ್ದ ಕೋಲಿನಿಂದ ನನ್ನ ಕೈಕಾಲುಗಳಿಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ಆರೋಪಿತರ ವಿರುದ್ಧ ನಿ ಪಿ 1 ರಂತೆ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿಃ 03-08-2017 ರಂದು ನಾನು ತೋರಿಸಿದ ಸ್ಥಳದಲ್ಲಿ ಚಾಸಾ 2 ಮತ್ತು 3 ರವರ ಸಮಕ್ಷಮ ಪೊಲೀಸರು ಬೆಳಗ್ಗೆ 10.00 ಗಂಟೆಯಿಂದ 11.00 ಗಂಟೆಯವರೆಗೆ

ಮಹಜರ್ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಕೋಲನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ದಿಃ 03-08-2017 ರಂದು ನಾನು ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿಲ್ಲ ಎಂದು ಮರುಹೇಳಿಕೆಯನ್ನು ಪೊಲೀಸರಿಗೆ ನೀಡಿರುತೇನೆ ಎಂದರೆ ಸರಿಯಲ್ಲ. ಸದರಿ ಮರುಹೇಳಿಕೆಯನ್ನು ನಿ ಪಿ 3 ಎಂದು ಗುರುತಿಸಲಾಯಿತು .

ಆರೋಪಿತರೊಂದಿಗೆ ರಾಜೀ ಮಾಡಿಕೊಂಡಿರುತ್ತೇನೆ ಎಂದರೆ ಸರಿ . ರಾಜೀ ಮಾಡಿಕೊಂಡ ಕಾರಣ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**